**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅ.ದೇವೇಗೌಡ ರವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

---

ವಿಷಯ: ರಾಜ್ಯದಲ್ಲಿ ಗಾಂಜಾ ಮತ್ತು ಡ್ರಗ್ಸ್ ಕಳ್ಳಸಾಗಣಿಕೆಯು ಮಾರಕ ರೋಗದಂತೆ ಹರಡುತ್ತಿದೆ. ಯುವ ವಿದ್ಯಾರ್ಥಿಗಳು ಓದು-ಬರಹ, ಕಲೆ, ಸಾಹಿತ್ಯ, ಉದ್ಯಮಗಳಂತಹ ವಿಭಾಗಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು, ಜೀವನವನ್ನು ಹಸನಾಗಿಸಿಕೊಳ್ಳಬೇಕಾದ ವಿದ್ಯಾರ್ಥಿಗಳು ಮತ್ತು ಯುವ ಸಮೂಹ ಗಾಂಜಾ ಮತ್ತು ಡ್ರಗ್ಸ್ ವ್ಯಸನಿಗಳಾಗುತ್ತಿದ್ದು, ಇದರಿಂದಾಗಿ ವಿದ್ಯಾರ್ಥಿಗಳ ಮತ್ತು ಯುವ ಜನತೆಯ ಜೀವನಕ್ಕೆ ಮಾರಕವಾಗಿ ಪರಿಣಮಿಸುತ್ತಿರುವುದು ಅತ್ಯಂತ ವಿಷಾದನೀಯ ವಿಷಯ.

ಅದರಲ್ಲೂ ರಾಜ್ಯದ ಮಹಾನಗರ ಹಾಗೂ ಸುಪ್ರಸಿದ್ಧ ಬೆಂಗಳೂರು ನಗರದಲ್ಲಿ ಗಣನೀಯವಾಗಿ ಈ ಹಾವಳಿಯು ಹೆಚ್ಚುತ್ತಿದ್ದು, ಇದು ಕಾನೂನು ಬಾಹಿರವಾಗಿದ್ದು, ನಗರದಲ್ಲಿ ಬಹು ರಾಷ್ಟ್ರೀಯ ಸಂಸ್ಥೆಗಳು ಹೆಚ್ಚಾಗಿದ್ದು ಈ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕೆಲವು ಉದ್ಯೋಗಿಗಳು ಸಹಾ ಡ್ರಗ್ಸ್ ವ್ಯಸನಿಗೆ ತುತ್ತಾಗಿ, ಕಳ್ಳತನ, ದರೋಡೆ ಹಾಗೂ ಇತರೆ ದುಶ್ಚಟಕ್ಕೆ ಬಲಿಯಾಗಿ, ಇದರಿಂದಾಗಿ ಅನೇಕ ವ್ಯಸನಿಗಳು ಮನೆಗಳು ಹಾಳಾಗಿವೆ. ನಮ್ಮ ರಾಜ್ಯ ಹಾಗೂ ದೇಶದ ಪ್ರಶ್ನೆಯಾಗಿದೆ.

ರಾಜ್ಯದ ಪ್ರತಿಷ್ಠೆಯಾಗಿದ್ದು, ಡ್ರಗ್ಸ್ ಕಳ್ಳಸಾಗಣಿಕೆ ರಾಜ್ಯಕ್ಕೆ ಪ್ರವೇಶಿಸದಂತೆ ಕಾನೂನು ರೂಪಿಸಿ, ಗಂಭೀರವಾಗಿ ಚಿಂತಿಸಿ ರಾಜ್ಯದ ವಿದ್ಯಾರ್ಥಿಗಳು, ಯುವ ಸಮೂಹವನ್ನು ಈ ದಂದೆಯಿಂದ ದೂರ ಮಾಡುವ ಬಗ್ಗೆ ಸನ್ಮಾನ್ಯ ಗೃಹ ಸಚಿವರ ಗಮನ ಸೆಳೆಯಬಯಸುತ್ತೇನೆ.

ಉತ್ತರ:

ರಾಜ್ಯದ ಹಾಗೂ ರಾಜ್ಯದಲ್ಲಿನ ನಗರ ಪ್ರದೇಶಗಳು, ಬೆಂಗಳೂರು ನಗರ ಸೇರಿದಂತೆ ಡ್ರಗ್ಸ್ ದಂಧೆಕೋರರ ಹಾಗೂ ಮಾದಕ ವ್ಯಸನಿಗಳ ವಿರುದ್ಧ ಶೂನ್ಯ ಸಹನೆ ಹೊಂದಿದ್ದು, ಡ್ರಗ್ಸ್ ಜಾಲವನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮತ್ತು ಸೇವನೆ ಮಾಡುವವರ ಕುರಿತು ಮಾಹಿತಿ ಸಂಗ್ರಹಿಸಿ, ದಾಳಿ ನಡೆಸಿ ಸದರಿಯವರುಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ.

ರಾಜ್ಯದಲ್ಲಿನ ಎಲ್ಲಾ ಜಿಲ್ಲೆ/ನಗರ ಪ್ರದೇಶಗಳಲ್ಲಿ ಎನ್.ಡಿ.ಪಿ.ಎಸ್.ಕಾಯ್ದೆ, 1985ರ ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಮತ್ತು ಡಗ್ಸ್ ದಂದೆಯಲ್ಲಿ ಭಾಗಿಯಾಗಿರುವವರಲ್ಲಿ ಬಂಧಿಸಿರುವ ಆರೋಪಿಗಳ ಸಂಖ್ಯೆ ಈ ಕೆಳಕಂಡಂತಿದೆ:

| ವರ್ಷ | ಎನ್.ಡಿ.ಪಿ.ಎಸ್ ಕಾಯ್ದೆ ಅಡಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ಬಂಧಿಸಿರುವ ಆರೋಪಿಗಳ ಸಂಖ್ಯೆ |
|---|---|---|
| 2021 | 5787 | 6434 |
| 2022 | 6398 | 6065 |
| 2023 (ಜೂನ್ 15ರ ವರೆಗೆ) | 3181 | 2431 |

**ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಡ್ರಗ್ಸ್ ದಂಧೆಕೋರರ ವಿರುದ್ಧ ಹಾಗೂ ಮಾದಕ ವಸ್ತುಗಳ ಸೇವನೆ ಮಾಡುವವರ ವಿರುದ್ಧ ದಾಖಲಿಸಲಾದ ಪ್ರಕರಣಗಳ ಅಂಕಿಅಂಶಗಳ ವಿವರಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ.**

| ವರ್ಷಾವಾರು | ಮಾದಕ ದ್ರವ್ಯ ಮಾರಾಟಗಾರರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ಬಂಧಿಸಿರುವ ಆರೋಪಿಗಳ ಸಂಖ್ಯೆ | ಮಾದಕ ದ್ರವ್ಯ ಸೇವನೆ ಮಾಡುವವರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ಬಂಧಿಸಿರುವ ಆರೋಪಿಗಳ ಸಂಖ್ಯೆ |
|---|---|---|---|---|
| 2021 | 696 | 1184 | 3859 | 4569 |
| 2022 | 579 | 977 | 3448 | 4238 |
| 2023 | 386 | 554 | 1935 | 2320 |

**ರಾಜ್ಯದಲ್ಲಿ ಡ್ರಗ್ಸ್ ಮಾರಾಟವನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:**

- ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ **1908**ನ್ನು ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.
- ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್. ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.
- ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.
- ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ದುಷ್ಪರಿಣಾಮಗಳ ಬಗ್ಗೆ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ.
- ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.
- ಸಾರ್ವಜನಿಕ ಸ್ಥಳಗಳು, ಜನಸಂದಣಿ ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಲ್ಲದೆ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್–ಬೀಟ್‌ಗಳಲ್ಲಿ ಆಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗಿದೆ.

- ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.
- ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances" Act, 1988ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.
- ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ-ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.
- ಕೊರಿಯರ್/ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮಜರುಗಿಸಲಾಗುತ್ತಿದೆ.
- ರಾಜ್ಯದಲ್ಲಿ 43 ಸೈಬರ್ ಎಕಾನಾಮಿಕ್ & ನಾರ್ಕೋಟಿಕ್ ಪೊಲೀಸ್ ಠಾಣೆ (CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯನಿರ್ವಹಿಸುತ್ತಿದೆ.

**ಮೇಲಿನ ಕ್ರಮಗಳೊಂದಿಗೆ ಬೆಂಗಳೂರು ನಗರದಲ್ಲಿ ಡ್ರಗ್ಸ್ ಮಾರಾಟ ಮತ್ತು ಮಾದಕ ವ್ಯಸನಿಗಳನ್ನು ತಡೆಗಟ್ಟಲು ಈ ಕೆಳಕಂಡಂತೆ ಕೈಗೊಂಡ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ.**

- ಬೆಂಗಳೂರು ನಗರಕ್ಕೆ ಮಾದಕ ವಸ್ತುಗಳು (ಗಾಂಜಾ) ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟು ನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. Bitcoin ಬಳಸಿ ಡಾರ್ಕ್ ನೆಟ್ (Darknet), ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.
- ಬೆಂಗಳೂರು ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.
- ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸೂಚಿಸಲಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗಿರುವವರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು, ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.

➢ ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಆರೋಪಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಿ NDPS Chapter-V ರಡಿಯಲ್ಲಿ ಇಬ್ಬರು ಡ್ರಗ್ಸ್ ಪೆಡ್ಲರ್‌ಗಳ ಸ್ಥಿರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

➢ ದಿನಾಂಕ 26.06.2023 ರಂದು ವಿಶ್ವ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳಸಾಗಾಣಿಕೆ ವಿರೋಧಿ ದಿನ ಅಂಗವಾಗಿ ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಎಲ್ಲಾ ದರ್ಜೆಯ ಪೊಲೀಸ್ ಅಧಿಕಾರಿಗಳು ಅಂದರೆ ನಗರ ಪೊಲೀಸ್ ಆಯುಕ್ತರಿಂದ ಪೊಲೀಸ್ ಉಪ ನಿರೀಕ್ಷಕರನ್ನು ಒಳಗೊಂಡಂತೆ, ಒಟ್ಟು 618 ಅಧಿಕಾರಿಗಳು, 388 ಶಾಲೆ, 253 ಕಾಲೇಜು ಹಾಗೂ 51 ವೃತ್ತಿನಿರತ ಕಾಲೇಜುಗಳಿಗೆ ಭೇಟಿ ನೀಡಿ, ಸುಮಾರು 1,95,000 ವಿದ್ಯಾರ್ಥಿಗಳಿಗೆ ಮಾದಕ ವಸ್ತು ದ್ರವ್ಯಗಳ ಸೇವನೆಯಿಂದ ಆಗುವ ಹಾನಿ ಹಾಗೂ ಎನ್.ಡಿ.ಪಿ.ಎಸ್ ಕಾಯ್ದೆ, 1985ರ ಬಗ್ಗೆ ಅರಿವು ಮೂಡಿಸಲಾಯಿತು.

➢ ಬೆಂಗಳೂರು ನಗರ ಪೊಲೀಸರು ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ಸಮರ ಸಾರಿದ್ದು, ಹವ್ಯಾಸಿ ಮಾದಕ ವಸ್ತುಗಳ ಮಾರಾಟಗಾರರ ಬಗ್ಗೆ ಕ್ರೋಢೀಕರಿಸಿದ ಮಾಹಿತಿಯನ್ನೊಳಗೊಂಡ ಒಂದು ದತ್ತಾಂಶ ಸಂಗ್ರಹಣೆಯ (Database) ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಈ ದತ್ತಾಂಶ ಸಂಗ್ರಹಣೆ (Database) ಯಿಂದ ಬೆಂಗಳೂರು ನಗರದ ಪೊಲೀಸರಿಗೆ ಅವಶ್ಯಕವಾದ ಮಾದಕ ವಸ್ತುಗಳ ಮಾರಾಟಗಾರರ ಮತ್ತು ಸೇವನೆ ಮಾಡುವವರ ಮಾಹಿತಿ ಶೀಘ್ರವಾಗಿ ದೊರಕುವಂತಾಗಿದೆ.

ಒಇ 20 ಪಿಎನ್‌ಡಿ 2023(ಇ)

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು